ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 25–12–2014

## ಪತ್ರಿಕಾ ಪ್ರಕಟಣೆ

### ಸೋಲಿಗರೊಂದಿಗೆ ವಾಸ್ತವ್ಯ ಹೂಡುವ ಮೂಲಕ ಹೊಸ ವರ್ಷ ಆಚರಣೆ:

### ಸಚಿವ ಆಂಜನೇಯ

**ಬೆಂಗಳೂರು, ಡಿಸೆಂಬರ್ 25, (ಕರ್ನಾಟಕ ವಾರ್ತೆ):**

ಗಿರಿಜನ (ಸೋಲಿಗರು) ಹಾಡಿಯಲ್ಲಿ ವಾಸ್ತವ್ಯ ಹೂಡಿ ಅಲ್ಲಿನ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ 2015 ರ ಹೊಸ ವರ್ಷವನ್ನು ಆಚರಿಸಲಾಗುವುದು ಎಂದು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್.ಆಂಜನೇಯ ಅವರು ತಿಳಿಸಿದರು.

ಅವರು ಇಂದು ಡಿ.ದೇವರಾಜ ಅರಸು ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತ ಚಾಮರಾಜನಗರ, ಮೈಸೂರು, ಮಡಿಕೇರಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಹಾಗೂ ಉತ್ತರ ಕರ್ನಾಟಕ ಜಿಲ್ಲೆಗಳ ದಟ್ಟ ಅರಣ್ಯ ಪ್ರದೇಶದಲ್ಲಿ ವಾಸಿಸುವಂತಹ ಸೋಲಿಗರು ಅನೇಕ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ ಅವರಿಗೆ ಸಂವಿಧಾನ ಆಶ್ರಯದಡಿಯಲ್ಲಿ ಸಿಗಬೇಕಾಗಿದೆ ಎಲ್ಲಾ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಡಿಸೆಂಬರ್ 31 ರಂದು ಚಾಮಾರಾಜನಗರ ಜಿಲ್ಲೆಯ ಕೊಳ್ಳೆಗಾಲ ತಾಲ್ಲೂಕಿನ ಡಟ್ಟ ಕಾಡುಗಳ ಮಧ್ಯೆ ಇರುವ ಗೊಂಬೆಗಲ್ಲು ಎಂಬ ಅರಣ್ಯ ಪ್ರದೇಶದಲ್ಲಿ ಸೋಲಿಗರೊಂದಿಗೆ ವಾಸ್ತವ್ಯ ಹೂಡಿ ಅಲ್ಲಿನ ಜನರ ಸಮಸ್ಯೆಗಳನ್ನು ಪರಿಹರಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಗೊಂಬೆಗಲ್ಲು ಪ್ರದೇಶದಲ್ಲಿ ಸೋಲಿಗರು ಹೆಚ್ಚಾಗಿ ವಾಸಿಸುತ್ತಿದ್ದು. ಈ ಹಾಡಿಯಲ್ಲಿ ಸುಮಾರು 30 ಕಟುಂಬಗಳು ಇದ್ದು, 250 ಜನರು ಇಲ್ಲಿ ವಾಸಿಸುತ್ತಿದ್ದಾರೆ. ಈ ಪ್ರದೇಶದಲ್ಲಿ ವಾಸ್ತವ್ಯ ಹೂಡಿ ಅವರ ಸಮಸ್ಯೆಗಳನ್ನು ಅರಿತು ಮೂಲಭೂತ ಸೌಕರ್ಯ ಹಾಗೂ ಫಲಾನುಭವಿಗಳನ್ನು ಗುರುತಿಸಿ ಸ್ಥಳದಲ್ಲಿಯೆ ಸವಲತ್ತುಗಳನ್ನು ಒದಗಿಸುವ ಭರವಸೆ ನೀಡಿದರು.

ಈ ಪ್ರದೇಶದಲ್ಲಿ ವಾಸಿಸುವಂತಹ ಸೋಲಿಗರಿಗೆ ಸರಿಯಾದ ರಸ್ತೆ, ಕುಡಿಯುವ ನೀರು ಹಾಗೂ ವಿದ್ಯುತ್ ದೀಪಗಳ ವ್ಯವಸ್ಥೆ ಇಲ್ಲ, ಶಿಕ್ಷಣದಿಂದಲ್ಲು ವಂಚಿತರಾಗುತ್ತಿರುವ ಇವರಿಗೆ ಸಿಗಬೇಕಾದ ಸೌಲಭ್ಯಗಳನ್ನು ನೀಡುವ ಮೂಲಕ ಉತ್ತಮ ನಾಗರಿಕರನ್ನಾಗಿ ಮಾಡಿ ಮುಖ್ಯವಾಹಿನಿಗೆ ತರುವುದೆ ಈ ವಾಸ್ತವ್ಯದ ಮುಖ್ಯ ಉದ್ದೇಶ ಎಂದು ಹೇಳಿದರು.

ಸಮಾಜಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಇಲಾಖೆ ಹಾಗೂ ಚಾಮರಾಜನಗರದ ಜಿಲ್ಲಾಡಳಿತದಿಂದ ಎಲ್ಲಾ ಹಿರಿಯ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಈ ವಾಸ್ತವ್ಯದಲ್ಲಿ ಭಾಗವಹಿಸಲಿದ್ದಾರೆ. ಡಿಸೆಂಬರ್ 31 ರಂದು ವಾಸ್ತವ್ಯ ಹೂಡಿ ಜನವರಿ 1, 2015 ಹೊಸ ವರ್ಷದ ದಿನದಂದು ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲಾಗುವುದು ಎಂದರು. ಮುಂದಿನ ವರ್ಷದಿಂದ ಪ್ರತಿ ತಿಂಗಳು ಕೊನೆಯ ದಿನದಂದು ರಾಜ್ಯದ ವಿವಿಧ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ವಾಸವಾಗಿರುವ ಗಿರಿಜನ ಸಮುದಾಯದ ಹಾಡಿಗಳಲ್ಲಿ ಹಾಗೂ ಸಣ್ಣಪುಟ್ಟ ಸಮುದಾಯದವರೇ ವಾಸವಾಗಿರುವ ಗ್ರಾಮಗಳಲ್ಲಿ ವಾಸ್ತವ್ಯ ಹೂಡಲಾಗುವುದು ಎಂದರು.

ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು ಗುಡ್ಡಗಾಡು ಪ್ರದೇಶದಲ್ಲಿರುವ 116 ಆಶ್ರಮ ಶಾಲೆಗಳನ್ನು ಕಾಯಕಲ್ಪಕ್ಕೆ ತರಲಾಗುವುದ, ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಿ ನುರಿತ ಶಿಕ್ಷಕರನ್ನು ನೇಮಿಸಿಲಾಗುವುದು, ನಗರದ ಶಾಲೆಗಳಂತೆಯೆ ಉತ್ತಮವಾದ ವಸತಿ, ಊಟ, ಉಡುಪು ಇತರೆ ಸೌಕರ್ಯಗಳನ್ನು ಒದಗಿಸಲಾಗುವುದು ಎಂದರು.